# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1640

ಸದಸ್ಯರ ಹೆಸರು : ಶ್ರೀ ಸುನೀಲ್ ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 19.12.2025.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಹಿರಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ನೇಮಕ ಮಾಡುವ, ಅಮಾನತ್ತುಗೊಳಿಸುವ, ಪುನರ್ ನೇಮಕ ಮಾಡಲು ಮತ್ತು ಸ್ಥಳ ನಿಯುಕ್ತಿ ಮಾಡುವ ಸಕ್ಷಮ ಪ್ರಾಧಿಕಾರ ಯಾರು; ಈ ಸಕ್ಷಮ ಪ್ರಾಧಿಕಾರಕ್ಕೆ ಸಿ.ಸಿ.ಎ. ನಿಯಮಾವಳಿಗಳಲ್ಲಿ ಸೂಕ್ತ ತಿದ್ದುಪಡಿ ಮಾಡಿ ರಾಜ್ಯಪತ್ರದಲ್ಲಿ ಪ್ರಕಟಿಸಿದ ಅಧಿಸೂಚನೆಯ ಪ್ರತಿ ನೀಡುವುದು; | ಹಿರಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ/ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಂಬಂಧಿಸಿದಂತೆ ನೇಮಕಾತಿ ಪ್ರಾಧಿಕಾರ ಅಮಾನತ್ತು ಮತ್ತು ಶಿಸ್ತು ಪ್ರಾಧಿಕಾರಗಳನ್ನು ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 97 ಜಿಪಿಕೆ 2023(ಇ), ಬೆಂಗಳೂರು, ದಿನಾಂಕ:15-07-2023 ರನ್ವಯ ನಿರ್ದಿಷ್ಟಪಡಿಸಲಾಗಿದ್ದು, ಸರ್ಕಾರದ ಆದೇಶದ ಪ್ರತಿಯನ್ನು ಅನುಬಂಧದಲ್ಲಿ ನೀಡಿದೆ.<br><br>ಈ ಆದೇಶದನ್ವಯ ಹಿರಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಸಂಬಂಧಿಸಿದಂತೆ ಸರ್ಕಾರ ನೇಮಕಾತಿ ಪ್ರಾಧಿಕಾರವಾಗಿದ್ದು, ಪುನರ್ ನೇಮಕ ಮಾಡಲು ಮತ್ತು ಸ್ಥಳ ನಿಯುಕ್ತಿಗೊಳಿಸಲೂ ಸಹ ಸಕ್ಷಮ ಪ್ರಾಧಿಕಾರವಾಗಿರುತ್ತದೆ. ಈ ವೃಂದದ ಅಧಿಕಾರಿಗಳನ್ನು ಅಮಾನತ್ತು ಮಾಡಲು ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ರವರು ಸಕ್ಷಮ ಪ್ರಾಧಿಕಾರವಾಗಿರುತ್ತಾರೆ.<br><br>ಮುಂದುವರೆದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಸಂಬಂಧಿಸಿದಂತೆ ಆಯುಕ್ತರು ಪಂಚಾಯತ್ ರಾಜ್ ರವರು ನೇಮಕಾತಿ ಪ್ರಾಧಿಕಾರವಾಗಿದ್ದು, ಪುನರ್ ನೇಮಕ ಮಾಡಲು ಮತ್ತು ಸ್ಥಳ ನಿಯುಕ್ತಿಗೊಳಿಸಲೂ ಸಹ ಸಕ್ಷಮ ಪ್ರಾಧಿಕಾರವಾಗಿರುತ್ತಾರೆ. ಈ ವೃಂದದ ಅಧಿಕಾರಿಗಳನ್ನು ಅಮಾನತ್ತು ಮಾಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್ ರವರು ಸಕ್ಷಮ ಪ್ರಾಧಿಕಾರವಾಗಿರುತ್ತಾರೆ.<br><br>ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ಕ್ಕೆ ತಿದ್ದುಪಡಿ ತರುವ ಪ್ರಸ್ತಾವನೆ ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ. |

| | | |
|---|---|---|
| (ಆ) | ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜೇಷ್ಟತಾ ಪಟ್ಟಿ ಕುರಿತಂತೆ ನ್ಯಾಯಾಲಯದಲ್ಲಿರುವ ಪ್ರಕರಣಗಳಾವುವು? (ವಿವರ ನೀಡುವುದು) | ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಗ್ರಾಅಪ 374 ಗ್ರಾಪಂಕಾ 2013, ದಿನಾಂಕ:21-02-2014ರಲ್ಲಿ ದಿನಾಂಕ:31-12-2011 ರಲ್ಲಿದ್ದಂತೆ ಪ್ರಕಟಿಸಲಾಗಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಜೇಷ್ಠತಾ ಪಟ್ಟಿ ಕುರಿತು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದ ರಿಟ್ ಅರ್ಜಿ ಸಂಖ್ಯೆ: 4524/2021 ರಲ್ಲಿ ದಿನಾಂಕ:22-06-2023 ರಲ್ಲಿನ ಆದೇಶದಂತೆ ರಚಿಸಲಾಗಿದ್ದ ಸಮಿತಿಯು ದಿನಾಂಕ:08-06-2024 ರಂದು ಸರ್ಕಾರಕ್ಕೆ ವರದಿ ಸಲ್ಲಿಸಿದೆ. ಅದರಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 51 ಜಿಪಿಕೆ 2024 ದಿನಾಂಕ:13-06-2024 ರಲ್ಲಿ ಸರ್ಕಾರವು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ಕರಡು ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲಾಗಿದೆ.<br><br>ಮಾನ್ಯ ನ್ಯಾಯಾಲಯವು ದಿನಾಂಕ:16-07-2024ರ ಮಧ್ಯಂತರ ಆದೇಶದಲ್ಲಿ ಮುಂದಿನ ವಿಚಾರಣಾ ದಿನಾಂಕದವರೆಗೂ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬಾರದೆಂದು ತಡೆಯಾಜ್ಞೆ ನೀಡಿತ್ತು.<br><br>ಮಾನ್ಯ ನ್ಯಾಯಾಲಯವು ಈ ಪ್ರಕರಣದಲ್ಲಿ ದಿನಾಂಕ:10-12-2025 ರಂದು ಅಂತಿಮ ಆದೇಶವನ್ನು ಹೊರಡಿಸಿದ್ದು, ಈ ಆದೇಶದನ್ವಯ ವಹಿಸಬೇಕಾದ ಕ್ರಮದ ಕುರಿತು ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಗ್ರಾಅಪ 1018 ಗ್ರಾಪಂಅ 2025

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.

ಅನುಬಂಧ

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:-** ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸೇವಾ ವಿಷಯಗಳ ನಿರ್ವಹಣೆ ಮತ್ತು ಶಿಸ್ತು ಪ್ರಾಧಿಕಾರವು ದಂಡನೆಗಳನ್ನು ವಿಧಿಸುವ ಬಗ್ಗೆ.- ಆದೇಶ.

**ಓದಲಾಗಿದೆ:** ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 313 ಜಿಪಿಕೆ 2022(2) (ಇ), ದಿನಾಂಕ:29.03.2023.

**ಪ್ರಸ್ತಾವನೆ.**

ಮೇಲೆ ಓದಲಾದ ಸರ್ಕಾರದ ಆದೇಶದಲ್ಲಿ, ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ಷೆಡ್ಯೂಲ್ II ಕ್ಕೆ ತಿದ್ದುಪಡಿ ತರುವುದನ್ನು ಬಾಕಿಯಿರಿಸಿ, ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ರಾಜ್ಯ ವೃಂದವನ್ನಾಗಿ ಪರಿಗಣಿಸಿ ಸರ್ಕಾರವನ್ನು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರವನ್ನಾಗಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳನ್ನು ರಾಜ್ಯ ವೃಂದವನ್ನಾಗಿ ಪರಿಗಣಿಸಿ ಆಯುಕ್ತರು, ಪಂಚಾಯತ್ ರಾಜ್ ರವರನ್ನು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರವನ್ನಾಗಿ ನೇಮಿಸಿ ಆದೇಶಿಸಿದೆ.

ಪ್ರಸ್ತುತ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಹಿರಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವರ ವಿರುದ್ಧದ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ ಪ್ರಕರಣಗಳು, ಕಾಲಬದ್ಧ ವೇತನ ಬಡ್ತಿ ಮಂಜೂರಾತಿ, ಪರೀಕ್ಷಾರ್ಥ ಅವಧಿ ಘೋಷಣೆ ಮತ್ತು ಇನ್ನಿತರ ಸೇವಾ ವಿಷಯಗಳ ಕುರಿತು ಸರ್ಕಾರ/ಆಯುಕ್ತಾಲಯಕ್ಕೆ ಪ್ರಸ್ತಾವನೆ ಸಲ್ಲಿಸುವ ಕುರಿತು ಸ್ಪಷ್ಟೀಕರಣ ಕೋರುತ್ತಿರುತ್ತಾರೆ.

ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಶಿಸ್ತು ಪ್ರಾಧಿಕಾರವು ಲಘು ಮತ್ತು ಕಠಿಣ ದಂಡನೆಗಳನ್ನು ವಿಧಿಸಲು, ಕಾಲಬದ್ಧ ವೇತನ ಬಡ್ತಿ ಮಂಜೂರಾತಿ, ಪರೀಕ್ಷಾರ್ಥ ಅವಧಿ ಘೋಷಣೆ ಮತ್ತು ಸೇವಾ ವಿಷಯಗಳ ನಿರ್ವಹಣೆ ಮಾಡುವ ಬಗ್ಗೆ ಪ್ರಾಧಿಕಾರವನ್ನು ನಿರ್ದಿಷ್ಟಪಡಿಸಲು ಸರ್ಕಾರವು ನಿರ್ಧರಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 97 ಜಿಪಿಕೆ 2023 (ಇ),**
**ಬೆಂಗಳೂರು ದಿನಾಂಕ:15-07-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಶಿಸ್ತು ಪ್ರಾಧಿಕಾರವು ಲಘು ಮತ್ತು ಕಠಿಣ ದಂಡನೆಗಳನ್ನು ವಿಧಿಸಲು, ಕಾಲಬದ್ಧ ವೇತನ ಬಡ್ತಿ ಮಂಜೂರಾತಿ, ಪರೀಕ್ಷಾರ್ಥ ಅವಧಿ ಘೋಷಣೆ ಮತ್ತು ಸೇವಾ ವಿಷಯಗಳ ನಿರ್ವಹಣೆ ಮಾಡಲು ಈ ಕೆಳಕಂಡಂತೆ ಪ್ರಾಧಿಕಾರವನ್ನು ನಿರ್ದಿಷ್ಟಪಡಿಸಿ ಸರ್ಕಾರವು ಆದೇಶಿಸಿದೆ.

| ಹುದ್ದೆಗಳ ವರ್ಗ | ನೇಮಕ ಮಾಡುವ ಅಧಿಕಾರವುಳ್ಳ ಪ್ರಾಧಿಕಾರಿ | ಪರೀಕ್ಷಾರ್ಥ ಅವಧಿ ಘೋಷಣೆ ಮಾಡುವ ಪ್ರಾಧಿಕಾರ | ಕಾಲಬದ್ಧ ವೇತನ ಬಡ್ತಿ ಮಂಜೂರು ಮಾಡುವ ಪ್ರಾಧಿಕಾರ | ಅಮಾನತ್ತು ಮಾಡುವ ಪ್ರಾಧಿಕಾರ | ದಂಡನೆಗಳನ್ನು ವಿಧಿಸುವ ಅಧಿಕಾರವುಳ್ಳ ಪ್ರಾಧಿಕಾರ ಮತ್ತು ಅವರು ವಿಧಿಸಬಹುದಾದ ದಂಡನೆಗಳು | | |
|---|---|---|---|---|---|---|---|
| | | | | | ಪ್ರಾಧಿಕಾರಿ | ದಂಡನೆಗಳು | ಅಪೀಲು ಪ್ರಾಧಿಕಾರ |
| 1 | 2 | 3 | 4 | 5 | 6 | 7 | 8 |
| ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ | ಸರ್ಕಾರ | - | ಸರ್ಕಾರ | ಆಯುಕ್ತರು, ಪಂಚಾಯತ್ ರಾಜ್ | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ | (ii) ರಿಂದ (iv-a) | ಆಯುಕ್ತರು, ಪಂಚಾಯತ್ ರಾಜ್ |
| | | | | | ಸರ್ಕಾರ | (v) ರಿಂದ (viii) | - |
| ಪಂಚಾಯತಿ ಅಭಿವೃದ್ಧಿ ಅಧಿಕಾರಿ | ಆಯುಕ್ತರು, ಪಂಚಾಯತ್ ರಾಜ್ | ಆಯುಕ್ತರು, ಪಂಚಾಯತ್ ರಾಜ್ | ಆಯುಕ್ತರು, ಪಂಚಾಯತ್ ರಾಜ್ | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ | ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ | (ii) ರಿಂದ (iv-a) | ಆಯುಕ್ತರು, ಪಂಚಾಯತ್ ರಾಜ್ |
| | | | | | ಆಯುಕ್ತರು, ಪಂಚಾಯತ್ ರಾಜ್ | (v) ರಿಂದ (viii) | ಸರ್ಕಾರ |

ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಸೇವಾ ವಹಿಗಳನ್ನು ವೇತನ ಬಟವಾಡೆ ಅಧಿಕಾರಿಯಾದ ಆಯಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳ ಹಂತದಲ್ಲಿ ನಿರ್ವಹಿಸತಕ್ಕದ್ದು.



2

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಪಂಚಾಯತ್ ರಾಜ್ ಆಯುಕ್ತಾಲಯದಲ್ಲಿ ನಿರ್ವಹಿಸತಕ್ಕದ್ದು.

ಹಿರಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ರಾಜ್ಯ ಮಟ್ಟದ ಜೇಷ್ಠತಾ ಪಟ್ಟಿಯನ್ನು ಸರ್ಕಾರದ ಹಂತದಲ್ಲಿ ನಿರ್ವಹಿಸತಕ್ಕದ್ದು.

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ) ನಿಯಮಗಳು, 1957ರ ನಿಯಮ 7-ಎ ರನ್ವಯ ಗ್ರೇಡ್-I ಗ್ರಾಮ ಪಂಚಾಯತಿ ಕಾರ್ಯದರ್ಶಿ ವೃಂದದ ರಾಜ್ಯ ಮಟ್ಟದ ಅಂತಿಮ ಜೇಷ್ಠತಾ ಪಟ್ಟಿಯನ್ನು ಆಯುಕ್ತರು, ಪಂಚಾಯತ್ ರಾಜ್ ರವರು ಪ್ರಕಟಿಸಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದದ ಮುಂಬಡ್ತಿ ಕೋಟಾದ ಖಾಲಿ ಹುದ್ದೆಗಳಿಗೆ ಮುಂಬಡ್ತಿ ನೀಡಲು ಕ್ರಮ ವಹಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಹಮ್ಮದ್ ಯೂಸುಫ್ ವೈ.ಎಂ.)
ನಿರ್ದೇಶಕರು(ಪಂ.ರಾಜ್) ಮತ್ತು
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆಂಪೇಗೌಡ ರಸ್ತೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಎಲ್ಲಾ ಜಿಲ್ಲಾ ಪಂಚಾಯತ್‌ಗಳು.
4. ಉಪಕಾರ್ಯದರ್ಶಿಗಳು (ಅಭಿವೃದ್ಧಿ), ಎಲ್ಲಾ ಜಿಲ್ಲಾ ಪಂಚಾಯತ್‌ಗಳು.
5. ಉಪಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ/ ಕಂಪ್ಯೂಟರ್ ಸೆಲ್.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ (ಪಂ.ರಾಜ್) ರವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು.



3